**All India Radio: Bangalore**
**Regional Bulletin In Kannada**
**12.11.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**12.11.2025 / 2.30 p.m.**
**<><><><>**

ಮುಖ್ಯಾಂಶಗಳು

1. ಮಾಲೂರು ವಿಧಾನಸಭೆ ಮರು ಮತ ಎಣಿಕೆ ಪೂರ್ಣ ; ಉಚ್ಚ ನ್ಯಾಯಾಲಯಕ್ಕೆ ಸಲ್ಲಿಕೆ
2. ಹಿಂದುಳಿದ ವರ್ಗಗಳ ಆಯೋಗದ ಆನ್‌ಲೈನ್ ಸಮೀಕ್ಷೆ ಇದೇ ೩೦ರವರೆಗೆ ವಿಸ್ತರಣೆ
3. ಸರ್ಕಾರ ರೈತರಿಂದ ಮೆಕ್ಕೆಜೋಳ ಖರೀದಿಸುವಂತೆ ಬಿಜೆಪಿ ಆಗ್ರಹ
4. ತಿಪಟೂರು ಕೊಬ್ಬರಿಗೆ ಭೌಗೋಳಿಕ ಮಾನ್ಯತೆಗಾಗಿ ತೋಟಗಾರಿಕೆ ಇಲಾಖೆ, ಎಪಿಎಂಸಿಯಿಂದ ನಿರ್ಣಯ
5. ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ದಾವಣಗೆರೆಗೆ ಫ್ಲೈಬಸ್ ಸೇವೆ - ಸಚಿವ ರಾಮಲಿಂಗಾರೆಡ್ಡಿ ಚಾಲನೆ

<><><><>

ಕೋಲಾರ ಜಿಲ್ಲೆಯ ಮಾಲೂರು ವಿಧಾನಸಭಾ ಕ್ಷೇತ್ರದ ಚುನಾವಣಾ ಮರು ಮತ ಎಣಿಕೆ ಕಾರ್ಯ ನಿನ್ನೆ ಮುಕ್ತಾಯಗೊಂಡಿದೆ. ಫಲಿತಾಂಶವನ್ನು ಮುಚ್ಚಿದ ಲಕೋಟೆಯಲ್ಲಿ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಸುಪ್ರೀಂಕೋರ್ಟ್ ಗೆ ರವಾನಿಸಿದ್ದಾರೆ. ಸುಪ್ರೀಂಕೋರ್ಟ್ ಆದೇಶದಂತೆ ಕೋಲಾರ ನಗರದ ಹೊರವಲಯದಲ್ಲಿರುವ ತೋಟಗಾರಿಕಾ ವಿಶ್ವವಿದ್ಯಾನಿಲಯದಲ್ಲಿ ಮತ ಎಣಿಕೆ ನಡೆದಿತ್ತು. ಬಿಗಿ ಪೊಲೀಸ್ ಬಂದೋಬಸ್ತ್‌ನಲ್ಲಿ ಮಾಲೂರು ಶಾಸಕ ಕೆ.ವೈ. ನಂಜೇಗೌಡ, ಬಿಜೆಪಿ ಪರಾಜಿತ ಅಭ್ಯರ್ಥಿ ಮಂಜುನಾಥ್ ಗೌಡ, ಪಕ್ಷೇತರ ಅಭ್ಯರ್ಥಿ ಹೂಡಿ ವಿಜಯ ಕುಮಾರ್ ಮತ್ತು ಅವರ ಚುನಾವಣಾ ಏಜೆಂಟರ ಸಮ್ಮುಖದಲ್ಲಿ ಮರು ಎಣಿಕೆ ನಡೆದಿತ್ತು.

<><><><>

ರಾಜ್ಯ ಹಿಂದುಳಿದ ವರ್ಗಗಳ ಆಯೋಗದಿಂದ ನಡೆಸುತ್ತಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯಲ್ಲಿ ವಿವಿಧ ಕಾರಣಗಳಿಂದಾಗಿ ಭಾಗವಹಿಸಲು ಸಾಧ್ಯವಾಗದೇ ಇರುವವರಿಗೆ ಅವಕಾಶ ನೀಡುವ ಹಿನ್ನೆಲೆಯಲ್ಲಿ ಆನ್‌ಲೈನ್ ಮೂಲಕ ಸಮೀಕ್ಷೆಯಲ್ಲಿ ಪಾಲ್ಗೊಳ್ಳುವ ಅವಧಿಯನ್ನು ಇದೇ ೩೦ರವರೆಗೆ ವಿಸ್ತರಿಸಲಾಗಿದೆ. ಸಮೀಕ್ಷೆಯಲ್ಲಿ ಇದುವರೆಗೂ ಪಾಲ್ಗೊಳ್ಳದೇ ಇರುವವರು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳುವಂತೆ ಮನವಿ ಮಾಡಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ : ೮೦೫೦೭೭೦೦೦೪ ಕ್ಕೆ ಸಂಪರ್ಕಿಸಬಹುದು ಎಂದು ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಸದಸ್ಯ ಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><><><>

ದೇವನಹಳ್ಳಿಯ ಕೆಐಎಡಿಬಿ ಏರೋಸ್ಪೇಸ್ ಪಾರ್ಕ್‌ನಲ್ಲಿ ಸ್ಥಾಪಿಸಲಾಗಿರುವ ಕಾಲಿನ್ಸ್ ಇಂಡಿಯಾ ಆಪರೇಷನ್ ಸೆಂಟರ್ ಮೇಲೆ ೮೮೦ ಕೋಟಿ ರೂಪಾಯಿ ಹೂಡಿಕೆ ಮಾಡಲಾಗಿದೆ ಎಂದು ಐಟಿಬಿಟಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಬೆಂಗಳೂರಿನ ಸುಮಾರು ೧೬ ಎಕರೆ ಪ್ರದೇಶದಲ್ಲಿ ಈ ಕ್ಯಾಂಪಸ್ ಕಾರ್ಯ ನಿರ್ವಹಿಸಲಿದೆ. ಕಾಲಿನ್ಸ್ ಸಂಸ್ಥೆಯ ಪ್ರಬಲ ಸಂಶೋಧನೆ ಮತ್ತು ಅಭಿವೃದ್ಧಿ ಉಪಸ್ಥಿತಿ ಆಧಾರಿತ ನಿರ್ಮಾಣವು ಮುಂದುವರಿಯಲಿದೆ.

ಇಂತಹ ಹೂಡಿಕೆಗಳು ಜಾಗತಿಕ ನಕಾಶೆಯಲ್ಲಿ ಉನ್ನತ ಮೌಲ್ಯದ ಏರೋಸ್ಪೇಸ್ ತಯಾರಿಕೆ ಹಾಗೂ ನಾವೀನ್ಯತೆಗಾಗಿ ರಾಜ್ಯದ ಸ್ಥಾನವನ್ನು ಇನ್ನಷ್ಟು ಬಲಪಡಿಸಲಿದೆ ಎಂದು ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ.

<><><>

ಹಾವೇರಿ ಜಿಲ್ಲೆಯಲ್ಲಿ ಮಳೆಯಿಂದಾಗಿ ಮೆಕ್ಕೆಜೋಳ, ಹೆಸರು, ಸೋಯಾಬಿನ್ ಬೆಳೆಗಳು ನಾಶವಾಗಿದ್ದು, ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ರಾಜ್ಯ ಸರ್ಕಾರ ಕೂಡಲೇ ಬೆಳೆ ನಷ್ಟ ಪರಿಹಾರ ನೀಡುವುದರ ಜೊತೆಗೆ ಮೆಕ್ಕೆಜೋಳ ಖರೀದಿ ಆರಂಭಿಸಬೇಕು ಎಂದು ಸಂಸದ ಬಸವರಾಜ ಬೊಮ್ಮಾಯಿ ಆಗ್ರಹಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಪ್ರತಿ ಟನ್ ಕಬ್ಬಿಗೆ ಸರ್ಕಾರ ನಿಗದಿ ಮಾಡಿರುವ ೩ ಸಾವಿರದ ೩೦೦ ರೂಪಾಯಿಯನ್ನು ಜಿಲ್ಲೆಯ ರೈತರಿಗೆ ನೀಡಬೇಕು ಶೀಘ್ರವೇ ನೀಡುವಂತೆ ಒತ್ತಾಯಿಸಿದ್ದಾರೆ. ಮರು ಸರ್ವೆ ಮಾಡಿ ಕೂಡಲೇ ಬೆಳೆ ನಷ್ಟ ಪರಿಹಾರವನ್ನು ರಾಜ್ಯ ಸರ್ಕಾರ ಘೋಷಣೆ ಮಾಡುವಂತೆ ತಿಳಿಸಿದ್ದಾರೆ. ಈ ನಡುವೆ ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಪ್ರತಿಪಕ್ಷ ನಾಯಕ ಆರ್. ಅಶೋಕ, ಸರ್ಕಾರ ರೈತರಿಂದ ಮೆಕ್ಕೆಜೋಳ ಖರೀದಿಸುವಂತೆ ಒತ್ತಾಯಿಸಿದ್ದಾರೆ.

**ಧ್ವನಿ : ಅಶೋಕ .ಆರ್ (೩೦ ಸೆಕೆಂಡ್‌ಗಳು)**

<><><>

ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ದಾವಣಗೆರೆಗೆ ನೇರ ಸಂಚಾರಕ್ಕಾಗಿ ಕೆಎಸ್‌ಆರ್‌ಟಿಸಿ ನೂತನ ಫ್ಲೈಬಸ್ ಸೇವೆಗೆ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಇಂದು ಚಾಲನೆ ನೀಡಿದರು. ದೇವನಹಳ್ಳಿ ಬಳಿಯ ಕೆಐಎನಿಂದ ದಾವಣಗೆರೆಗೆ ಪ್ರತಿದಿನ ೨ ಫ್ಲೈಬಸ್‌ಗಳು ಸಂಚರಿಸಲಿವೆ. ಈ ಬಸ್‌ಗಳು ತುಮಕೂರು ಮತ್ತು ಚಿತ್ರದುರ್ಗ ಬೈಪಾಸ್ ಮಾರ್ಗವಾಗಿ ಪ್ರಯಾಣಿಸಲಿದೆ ಎಂದು ಸಾರಿಗೆ ಇಲಾಖೆ ತಿಳಿಸಿದೆ. ಏರ್‌ಪೋರ್ಟ್‌ಗೆ ಬರುವ ಮತ್ತು ಏರ್‌ಪೋರ್ಟ್‌ನಿಂದ ತೆರಳುವ ಪ್ರಯಾಣಿಕರ ಅನುಕೂಲಕ್ಕಾಗಿ ಈ ಫ್ಲೈಬಸ್ ಸೇವೆ ಆರಂಭಿಸಲಾಗಿದೆ.

<><><>

ಪಿಂಚಣಿದಾರರಿಗೆ ಅನುಕೂಲ ಕಲ್ಪಿಸುವ ಮತ್ತು ಜೀವಿತ ಪ್ರಮಾಣ ಪತ್ರ ಸಲ್ಲಿಸುವ ಪ್ರಕ್ರಿಯೆಯನ್ನು ಸರಳೀಕರಿಸುವ ನಿಟ್ಟಿನಲ್ಲಿ ನೈರುತ್ಯ ರೈಲ್ವೆಯು ಮಹತ್ವದ ಕ್ರಮ ಕೈಗೊಂಡಿದೆ. 'ಡಿಜಿಟಲ್ ಲೈಫ್ ಸರ್ಟಿಫಿಕೇಟ್ ಅಭಿಯಾನ ೪.೦' ಅನ್ನು ತನ್ನ ಪಿಂಚಣಿದಾರರಿಗೆ ಪ್ರಾರಂಭಿಸಿದೆ. ಇದರಿಂದಾಗಿ ಬ್ಯಾಂಕ್ ಅಥವಾ ಕಚೇರಿಗಳಿಗೆ ಖುದ್ದಾಗಿ ಭೇಟಿ ನೀಡುವ ಅಗತ್ಯವಿಲ್ಲದೇ ತಮ್ಮ ಮನೆಯಿಂದಲೇ ಆನ್‌ಲೈನ್ ಮೂಲಕ ಜೀವಿತ ಪ್ರಮಾಣ ಪತ್ರಗಳನ್ನು ಸಲ್ಲಿಸಲು ಅನುಕೂಲವಾಗಿದೆ. ಈ ಬಳಕೆದಾರ-ಸ್ನೇಹಿ ಡಿಜಿಟಲ್ ವ್ಯವಸ್ಥೆಯು ವಿಶೇಷವಾಗಿ ಹಿರಿಯ ನಾಗರಿಕರಿಗೆ ಹೆಚ್ಚಿನ ಪ್ರಯೋಜನವನ್ನು ನೀಡಲಿದೆ. ಎಲ್ಲಾ ಪಿಂಚಣಿದಾರರು ಈ ಸುಲಭ, ಸುರಕ್ಷಿತ ಮತ್ತು ಸಮಯ ಉಳಿತಾಯದ ಡಿಜಿಟಲ್ ಸೌಲಭ್ಯವನ್ನು ಬಳಸಿಕೊಳ್ಳಬೇಕು. ಇದರಿಂದ ಪಿಂಚಣಿ ಪ್ರಯೋಜನಗಳು ಸಕಾಲದಲ್ಲಿ ಯಾವುದೇ ಅಡಚಣೆಯಿಲ್ಲದೆ ಮುಂದುವರಿಯುವುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

<><><>

ತಿಪಟೂರು ಕೊಬ್ಬರಿಗೆ ಭೌಗೋಳಿಕ ಸೂಚ್ಯಂಕ ಸಿಗುವ ನಿರೀಕ್ಷೆಯಿದೆ. ಇದರಿಂದ ಕೊಬ್ಬರಿಗೆ ಕಾನೂನು ರಕ್ಷಣೆ ದೊರೆತು ಅನಧಿಕೃತ ಬಳಕೆ ತಪ್ಪಲಿದೆ. ಈ ಹಿನ್ನೆಲೆಯಲ್ಲಿ ತಿಪಟೂರು ಎಪಿಎಂಸಿಯಲ್ಲಿ ತೋಟಗಾರಿಕಾ ಇಲಾಖೆ ಹಾಗೂ ಎಪಿಎಂಸಿ ಅಧಿಕಾರಿಗಳು ಸಭೆ ನಡೆಸಿದ್ದಾರೆ. ಸಭೆಯಲ್ಲಿ ತೆಂಗು ಮತ್ತು ಕೊಬ್ಬರಿಗೆ ಭೌಗೋಳಿಕ ಸೂಚ್ಯಂಕ

ಪಡೆಯಲು ತಿಪಟೂರು ರೈತ ಉತ್ಪಾದಕರ ಸಂಘ ಹಾಗೂ ಕೊಕೊನೆಟ್ ಎಫ್‌ಪಿಓ ಅರ್ಜಿದಾರರಾಗಿದ್ದಾರೆ. ತೋಟಗಾರಿಕೆ ಇಲಾಖೆ ನಬಾರ್ಡ್ ಧನ ಸಹಾಯ ಮಾಡುವಂತೆ ಹಾಗೂ ಎಪಿಎಂಸಿ ಸಹಕಾರ ನೀಡುವಂತೆ ಸಭೆಯಲ್ಲಿ ನಿರ್ಧರಿಸಲಾಗಿದೆ. ಜಿಐ ಪಡೆಯಲು ಬೇಕಾದ ನಿರ್ದಿಷ್ಟ ಮಾನದಂಡಗಳು, ಸಮಯ ಹಾಗೂ ದಾಖಲೆಪತ್ರಗಳ ಪ್ರಕ್ರಿಯೆ, ಉತ್ಪನ್ನದ ಇತಿಹಾಸ ಮತ್ತು ಪರಂಪರೆ ಪ್ರಮಾಣ, ಹಣಕಾಸು ವ್ಯವಸ್ಥೆ, ಗುಣಮಟ್ಟದ ಬಗ್ಗೆ, ಮಣ್ಣಿನ ಗುಣಲಕ್ಷಣ, ನೊಂದಾಣಿಯ ಬಗ್ಗೆ ಕುರಿತು ಅಧಿಕಾರಿಗಳು ಹಾಗೂ ರೈತರು ಚರ್ಚಿಸಿದರು.

**ಧ್ವನಿ : ಜ್ಞಾನೇಶ್ ( ಸೆಕೆಂಡ್‌ಗಳು)**

ಭೌಗೋಳಿಕ ಸೂಚ್ಯಂಕ ಎನ್ನುವುದು ಒಂದು ನಿರ್ದಿಷ್ಟ ಪ್ರದೇಶಕ್ಕೆ ಮಾತ್ರ ಸಂಬಂಧಿಸಿದ ಅಲ್ಲಿನ ಉತ್ಪನ್ನಕ್ಕೆ ಅದರ ಗುಣ, ಖ್ಯಾತಿ, ಸ್ವರೂಪ ಅಥವಾ ವಿಶಿಷ್ಟತೆಗಾಗಿ ನೀಡುವ ಹಕ್ಕು ಹಾಗೂ ಮಾನ್ಯತೆಯ ಉದ್ದೇಶವಾಗಿದೆ. ಇದರಿಂದ ಸ್ಥಳೀಯ ಉತ್ಪನ್ನಗಳಿಗೆ ಅಂತಾರಾಷ್ಟ್ರೀಯ ಗುರುತು, ಸ್ಪರ್ಧಾತ್ಮಕವಾಗಿ ಮೌಲ್ಯ ಹೆಚ್ಚಿಸುವುದು, ಉತ್ಪಾದಕರಿಗೆ ಉತ್ತಮ ಬೆಲೆ ಮತ್ತು ಮಾರುಕಟ್ಟೆ ಅವಕಾಶ, ನಕಲಿ ಉತ್ಪನ್ನಗಳಿಂದ ರಕ್ಷಣೆ ಸಿಗಲಿದೆ.

<><><><>

ದೇಶ ಅಭಿವೃದ್ಧಿ ಹೊಂದಲು ಮಾನವ ಸಂಪನ್ಮೂಲ ಬಹಳ ಮುಖ್ಯ, ಅದರಲ್ಲೂ ಯುವ ಜನತೆ ದೇಶದ ಶಕ್ತಿ ಎಂದು ಮಂಡ್ಯ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕೆ.ಆರ್.ನಂದಿನಿ ಅಭಿಪ್ರಾಯಪಟ್ಟಿದ್ದಾರೆ. ಸರ್ದಾರ್ ವಲ್ಲಭಭಾಯಿ ಪಟೇಲ್ ರವರ ೧೪೫ನೇ ಜನ್ಮದಿನೋತ್ಸವದ ಪ್ರಯುಕ್ತ  ಮಂಡ್ಯ ವಿಶ್ವವಿದ್ಯಾಲಯದ ಆವರಣದಲ್ಲಿ ನಡೆದ ಜಿಲ್ಲಾ ಮಟ್ಟದ ಪಾದಯಾತ್ರೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಸರ್ದಾರ್ ವಲ್ಲಭಭಾಯಿ ಪಟೇಲ್ ಅವರು ಕೇವಲ ರಾಜಕೀಯ ವ್ಯಕ್ತಿಯಾಗದೆ ಸಮಾಜ ಸುಧಾರಕರಾಗಿ ನೀಡಿರುವ ಕೊಡುಗೆ ನಿಜಕ್ಕೂ ಅಪಾರ ಎಂದು ಬಣ್ಣಿಸಿದರು.

<><><><>

ತಿಥಿ ಸಿನಿಮಾ ಖ್ಯಾತಿಯ ಗಡ್ಡಪ್ಪ ಮಂಡ್ಯ ತಾಲೂಕಿನ ನೊದೆ ಕೊಪ್ಪಲು ಗ್ರಾಮದ ತಮ್ಮ ನಿವಾಸದಲ್ಲಿ ಇಂದು ನಿಧನರಾಗಿದ್ದಾರೆ. ಅಂತಾರಾಷ್ಟ್ರೀಯ ಪ್ರಶಸ್ತಿ ವಿಜೇತ ತಿಥಿ ಸಿನಿಮಾದಲ್ಲಿ ಮುಖ್ಯ ಭೂಮಿಕೆಯಲ್ಲಿ ನಟಿಸಿದ್ದ ಅವರು, ಆ ಸಿನಿಮಾದ ಮೂಲಕ ಗಡ್ಡಪ್ಪ ಅಂತಾನೇ ಪ್ರಸಿದ್ಧಿಯಾಗಿದ್ದರು. ಅವರ ಮೂಲ ಹೆಸರು ಚನ್ನೇಗೌಡ. ಅವರಿಗೆ ೮೯ ವರ್ಷ ವಯಸ್ಸಾಗಿತ್ತು. ತಿಥಿ, ತರ್ಲೆ ವಿಲೇಜ್, ಜಾನಿ ಮೇರಾ ನಾಮ್, ಹಳ್ಳಿ ಪಂಚಾಯಿತಿ ಸೇರಿ ಸುಮಾರು ೮ ಸಿನಿಮಾಗಳಲ್ಲಿ ಅಭಿನಯಿಸಿದ್ದರು. ಅಸ್ತಮಾ, ಹೃದಯ ಸಂಬಂಧಿ ಕಾಯಿಲೆಯಿಂದ ಬಳಲುತ್ತಿದ್ದ ಗಡ್ಡಪ್ಪ, ಚಿಕಿತ್ಸೆ ಫಲಕಾರಿಯಾಗದೆ ನಿಧನ ಹೊಂದಿದ್ದಾರೆ.

<><><><>

ಭಾರತದ ಐಕ್ಯತೆ ಹಾಗೂ ಅಭಿವೃದ್ಧಿಗಾಗಿ ಯುವಜನಾಂಗ ಕೈಜೋಡಿಸುವಂತೆ ಯಾದಗಿರಿ ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ಕರೆ ನೀಡಿದ್ದಾರೆ. ಏಕ ಭಾರತ-ಆತ್ಮನಿರ್ಭರ ಭಾರತ, ಐಕ್ಯತಾ ಪಾದಯಾತ್ರೆಗೆ ಹಸಿರು ನಿಶಾನೆ ತೋರಿಸಿ ಮಾತನಾಡಿದ ಅವರು, ಭಾರತೀಯರೆಲ್ಲರೂ ದೇಶದ ಐಕ್ಯತೆಗಾಗಿ ಶ್ರಮಿಸಬೇಕು ಎಂದು ತಿಳಿಸಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>